ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬೃ.ಬೆಂ.ಮ.ಪಾ/ಕಾ.ಪಾ.ಅ(ವಿ)/ಯ.ಪ/ಆ.ಅ/ 11 /22-23

ಕಾರ್ಯಪಾಲಕ ಅಭಿಯಂತರು(ವಿದ್ಯುತ್) ರವರ ಕಛೇರಿ
ಬೃ.ಬೆಂ.ಮ.ಪಾ, ಯಲಹಂಕ ವಲಯ
ಬ್ಯಾಟರಾಯನಪುರ, ಬೆಂಗಳೂರು-01.
ದಿನಾಂಕ: 28-12-2022

ಆಡಳಿತಾತ್ಮಕ ಅನುಮೋದನೆ

ವಿಷಯ:- *Annual Maintenance and Repairs of Electrical Installations to BBMP buildings coming under Yelahanka Constituency.*

ಉಲ್ಲೇಖ:- 1. ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ:27-07-2021ರ ಮೇರೆಗೆ ಕಾಮಗಾರಿ ಸಂಕೇತ ನಿರೀಕ್ಷಿಸಿ.

2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಟಿಪ್ಪಣಿ ದಿನಾಂಕ:29.08.2022

3. "ತೆರಿಗೆ ವಿಧಿಸುವಿಕೆ ಮತ್ತು ಹಣಕಾಸು ಮತ್ತು ಅಫೀಲು ಸ್ಥಾಯಿ ಸಮಿತಿ ವಾರ್ಡ್ ಮಟ್ಟದ ಲೋಕೋಪಯೋಗಿ ಕಾಮಗಾರಿ, ನಗರಯೋಜನೆ ಹಾಗೂ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರರ ನಡವಳಿಗಳು ವಿಷಯದ ಸಂಖ್ಯೆ:223/2022-23, ದಿನಾಂಕ:06.09.2022"

4. ಅಂದಾಜು ಮೊತ್ತ: **ರೂ.6.00 ಲಕ್ಷಗಳು**

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಯಲಹಂಕ ವಲಯರವರು ಈ ಕೆಳಗಿನ ಕಾಮಗಾರಿಗೆ 2022-23 ನೇ ಸಾಲಿನ ಅಯವ್ಯಯದ ಲೆಕ್ಕ ಶಿರ್ಷಿಕೆ-**P0294** ಅಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರಪಾಲಿಕೆ ಯಲಹಂಕ ವಲಯ ವಿದ್ಯುತ್ ವಿಭಾಗಕ್ಕೆ 2022-23 ನೇ ಸಾಲಿನ ಪಿ.ಓ.ಡಬ್ಲ್ಯೂ ಅನುದಾನದಡಿಯಲ್ಲಿ ಕೆ.ಪಿ.ಡಬ್ಲ್ಯುಡಿ. 2021-22 ವಿದ್ಯುತ್ (ಎಸ್.ಆರ್) ದರಗಳ ಹಾಗೂ ಅನುಮೋದಿತ ದರಗಳ ಅನ್ವಯ ಅಂದಾಜು ಪಟ್ಟಿಯನ್ನು ತಯಾರಿಸಿ, ಮಾನ್ಯ ಮುಖ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರು 2022-23 ನೇ ಸಾಲಿನ ವಿದ್ಯುತ್ ಕ್ರಿಯಾ ಯೋಜನೆಯನ್ನು ಮಾನ್ಯ ಆಡಳಿತಗಾರರಿಂದ ನಿರೀಕ್ಷಿಸಿ ಅನುಮೋದಿಸಿರುವ ಮೇರೆಗೆ ಸದರಿ ಕಾಮಗಾರಿ ಕೆಲಸಕ್ಕೆ ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಉಲ್ಲೇಖ (01) ರಂತೆ ನೀಡಿರುವ ಅಧಿಕಾರದನ್ವಯ ಉಲ್ಲೇಖ (02) ರಂತೆ ಮೇಲಿನ ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಆಡಳಿತಾತ್ಮಕ ಮಂಜೂರಾತಿ ಪುಸ್ತಕದ ಪುಟ ಸಂಖ್ಯೆ- 118 & 119 ಕ್ರಮಸಂಖ್ಯೆ: 11 ರಲ್ಲಿ ನಮೂದಿಸಲಾಗಿದೆ.

ಈ ಮೇಲ್ಕಂಡ ಅಂದಾಜುಪಟ್ಟಿಗೆ ಕೆಳಗೆ ನಮೂದಿಸಿರುವ ಷರತ್ತುಗಳನ್ನು ಪಾಲಿಸುವ ನಿಬಂಧನೆಯೊಂದಿಗೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ.1.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು
2. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಲಾಗ್ ಪುಸ್ತಕದಲ್ಲಿ ಗುತ್ತಿಗೆದಾರರು ನಿರ್ವಹಿಸಿದ ಕಾರ್ಯ ಚಟುವಟಿಕೆಗಳ ಬಗ್ಗೆ ದಾಖಲೆ ರೂಪದಲ್ಲಿ ನಮೂದಿಸಿಕೊಳ್ಳುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್)
ಬಿಬಿಎಂಪಿ, ಯಲಹಂಕ ವಲಯ

ಪ್ರತಿಯನ್ನು: ಮುಖ್ಯ ಅಭಿಯಂತರರು, ಯಲಹಂಕ ವಲಯರವರ ಮಾಹಿತಿಗಾಗಿ.